# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಸದಸ್ಯರ ಹೆಸರು | : | ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 269 |
| ಉತ್ತರಿಸಬೇಕಾದ ದಿನಾಂಕ | : | 15.02.2023 |
| ಉತ್ತರಿಸಬೇಕಾದ ಸಚಿವರು | : | ಮಾನ್ಯ ಪಶುಸಂಗೋಪನೆ ಸಚಿವರು. |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ | ಬೀದರ ಜಿಲ್ಲೆಯ ವ್ಯಾಪ್ತಿಯಲ್ಲಿ ಅನುಗ್ರಹ ಕೊಡುಗ್ಗೆ ಯೋಜನೆ ಅಡಿಯಲ್ಲಿ ಕುರಿಗಳು ಸಾವನ್ನೊಪ್ಪಿ ಒಂದು ವರ್ಷ ಕಳೆದರೂ ಇಲ್ಲಿಯವರೆಗೆ ಕುರಿ ಸಾಕಾಣಿಕೆದಾರರಿಗೆ ಪರಿಹಾರ ಧನ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು, ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br><br>ಬೀದರ್ ಜಿಲ್ಲೆಯಲ್ಲಿ ಅನುಗ್ರಹ ಕೊಡುಗೆ ಯೋಜನೆಯಡಿಯಲ್ಲಿ 2021-22ನೇ ಸಾಲಿಗೆ 431 ಫಲಾನುಭವಿಗಳಿಗೆ ರೂ.23,52,500/-ಗಳ ಪರಿಹಾರಧನವನ್ನು ನೀಡಲಾಗಿದೆ. |
| ಆ | ಬಂದಿದ್ದಲ್ಲಿ, ಇಲ್ಲಿಯವರೆಗೆ ಪರಿಹಾರ ಧನ ನೀಡದಿರಲು ಕಾರಣವೇನು; ಪರಿಹಾರ ನೀಡಲು ವಿಳಂಬ ಮಾಡುವುದರಿಂದ ಕುರಿ ಸಾಕಾಣಿಕೆದಾರರ ಜೀವನ ಕಷ್ಟಕರವಾಗುವುದಿಲ್ಲವೇ; | 2022-23ನೇ ಸಾಲಿನ ಆರ್ಥಿಕ ವರ್ಷದಲ್ಲಿ ಸದರಿ ಯೋಜನೆಯಡಿ ಅನುದಾನ ಬಿಡುಗಡೆ ಯಾಗಿರುವುದಿಲ್ಲ.<br><br>2021-22ನೇ ಸಾಲಿನಲ್ಲಿ ಬಾಕಿ ಇರುವ ಹಾಗೂ 2022-23ನೇ ಸಾಲಿನ ಅಂತ್ಯಕ್ಕೆ ಪರಿಹಾರ ಧನ ವಿತರಿಸುವ ಸಲುವಾಗಿ ಅವಶ್ಯವಿರುವ ಅನುದಾನ ರೂ.47.90 ಕೋಟಿ ಬಿಡುಗಡೆಗಾಗಿ ಆರ್ಥಿಕ ಇಲಾಖೆಗೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ. |
| ಇ | ಕುರಿ ಸಾಕಾಣಿಕೆದಾರರಿಗೆ ಪರಿಹಾರ ಧನವನ್ನು ಯಾವಾಗ ನೀಡಲಾಗುವುದು? | ಅನುದಾನ ಬಿಡುಗಡೆಯಾದ ಕೂಡಲೇ ಕುರಿ ಸಾಕಾಣಿಕೆದಾರರಿಗೆ ಪರಿಹಾರ ಧನ ವಿತರಿಸಲು ಕ್ರಮವಹಿಸಲಾಗುವುದು. |

ಇ-ಪಸಂಮೀ 33 ಸಲೆವಿ 2023

(ಪ್ರಭು ಬಿ. ಚವ್ಹಾಣ್)
ಪಶುಸಂಗೋಪನೆ ಸಚಿವರು